# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 937 |
| ಸದಸ್ಯರ ಹೆಸರು | : | ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 27-12-2022 |
| ಉತ್ತರಿಸುವ ಸಚಿವರು | : | ನಗರಾಭಿವೃದ್ಧಿ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ತುಮಕೂರು ನಗರದ ಸ್ಮಾರ್ಟ್ ಸಿಟಿ ಯೋಜನೆಯ ಕಾಮಗಾರಿಗಳಿಗೆ ಮಂಜೂರಾಗಿರುವ ಅನುದಾನ ಎಷ್ಟು (ಕಳೆದ 03 ವರ್ಷಗಳ ಸಂಪೂರ್ಣ ಮಾಹಿತಿ ನೀಡುವುದು)</td><td>ತುಮಕೂರು ನಗರದಲ್ಲಿ ಸ್ಮಾರ್ಟ್‌ಸಿಟಿ ಕಾಮಗಾರಿಗಳ ಅನುಷ್ಠಾನಕ್ಕೆ ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆಯಾಗಿರುವ ಅನುದಾನದ ವಿವರ ಈ ಕೆಳಗಿನಂತಿದೆ;<br>(ರೂ. ಕೋಟಿಗಳಲ್ಲಿ)<br><table><tr><th>ವರ್ಷ</th><th>ಕೇಂದ್ರ ಸರ್ಕಾರ</th><th>ರಾಜ್ಯ ಸರ್ಕಾರ</th><th>ಒಟ್ಟು</th></tr><tr><td>2020-21</td><td>98.00</td><td>186.00</td><td>284.00</td></tr><tr><td>2021-22</td><td>98.00</td><td>117.00</td><td>215.00</td></tr><tr><td>2022-23</td><td>49.00</td><td>-</td><td>49.00</td></tr><tr><td>ಒಟ್ಟು</td><td>245.00</td><td>303.00</td><td>548.00</td></tr></table></td></tr>
<tr><td>ಆ)</td><td>ಸ್ಮಾರ್ಟ್ ಸಿಟಿ ಯೋಜನೆಯ ಕಾಮಗಾರಿ ಪ್ರಗತಿಯು ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ</td><td>• ಸ್ಮಾರ್ಟ್‌ಸಿಟಿ ಕಾಮಗಾರಿಗಳನ್ನು ನಗರದ ಹೃದಯಭಾಗದ ಪ್ರದೇಶದಲ್ಲಿ ಕೈಗೊಳ್ಳುತ್ತಿರುವುದರಿಂದ ಹಾಗೂ ತುಮಕೂರು ನಗರದಲ್ಲಿ ಸ್ಮಾರ್ಟ್‌ಸಿಟಿ ಕಾಮಗಾರಿಗಳ ಜೊತೆ 24*7 ನೀರು ಸರಬರಾಜು ಮತ್ತು ಒಳಚರಂಡಿ ಯೋಜನೆ, ಗ್ಯಾಸ್ ಪೈಪ್‌ಲೈನ್ ಅಳವಡಿಕೆ ಮುಂತಾದ ಕಾಮಗಾರಿಗಳನ್ನು ವಿವಿಧ ಇಲಾಖೆಗಳಿಂದ ಅನುಷ್ಠಾನಗೊಳಿಸುತ್ತಿರುವ ಕಾರಣ ಸದರಿ ಇಲಾಖೆಗಳ ನಡುವೆ ಸಮನ್ವಯ ಸಾಧಿಸಿ ಕಾಮಗಾರಿ ಅನುಷ್ಠಾನ ಸಮಯದಲ್ಲಿ ಎದುರಾಗುವ ಹಲವಾರು ಸಮಸ್ಯೆಗಳಿಗೆ ಪರಿಹಾರ ಕಂಡುಕೊಂಡು ಸ್ಮಾರ್ಟ್‌ಸಿಟಿ ಕಾಮಗಾರಿಗಳನ್ನು ಕಾರ್ಯಗತಗೊಳಿಸಲಾಗುತ್ತಿದೆ.<br>• ಕೋವಿಡ್ -19ರ ಕಾರಣದಿಂದಾಗ್ಯೂ 2020ರ ಸಾಲಿನಲ್ಲಿ 5 ತಿಂಗಳು ಹಾಗೂ 2021ರ ಸಾಲಿನಲ್ಲಿ 3 ತಿಂಗಳು ಕಾಮಗಾರಿಗಳ ಅನುಷ್ಠಾನದಲ್ಲಿ ಅನಿವಾರ್ಯ ವಿಳಂಬವಾಗಿರುತ್ತದೆ.<br>• ಸದರಿ ಪ್ರದೇಶದಲ್ಲಿ ಈಗಾಗಲೇ ಇರುವ ನೀರು ಸರಬರಾಜು, ಒಳಚರಂಡಿ, ವಿದ್ಯುತ್ ಲೈನ್, ಟೆಲಿಕಾಂ ಕೇಬಲ್ ಮತ್ತು ಅನೇಕ (Utilities) ಉಪಯುಕ್ತತೆಗಳಿದ್ದು, ಇವುಗಳನ್ನು ಸ್ಥಳಾಂತರಿಸುವುದು, ಮುಂತಾದ ಚಟುವಟಿಕೆಗಳಿಂದ ಸ್ವಲ್ಪ ಮಟ್ಟಿನ ವಿಳಂಬವಾಗಿದ್ದು ಸಮಸ್ಯೆಗಳನ್ನು ನಿವಾರಿಸಿಕೊಂಡು ಸ್ಮಾರ್ಟ್‌ಸಿಟಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.</td></tr>
<tr><td>ಇ)</td><td>ಬಂದಿದ್ದಲ್ಲಿ, ಸ್ಮಾರ್ಟ್ ಸಿಟಿ ಕಾಮಗಾರಿಯನ್ನು ಪೂರ್ಣಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?</td><td>ಈ ಮೇಲಿನ ಸವಾಲುಗಳ ಹಿನ್ನೆಲೆಯಲ್ಲಿ ಸ್ಮಾರ್ಟ್‌ಸಿಟಿ ಯೋಜನೆಯ ಅನುಷ್ಠಾನದ ಬಗ್ಗೆ ಸರ್ಕಾರವು ಸತತವಾಗಿ ನಿಗಾವಹಿಸಿದ್ದು, ಕಾಮಗಾರಿಗಳ ಶೀಘ್ರ ಅನುಷ್ಠಾನಕ್ಕೆ ಈ ಕೆಳಗಿನ ಸಮರ್ಪಕ ಕ್ರಮಗಳನ್ನು ಕೈಗೊಳ್ಳಲಾಗಿದೆ.<br>• ಅಭಿಯಾನದ ಮಾರ್ಗಸೂಚಿ ಅನುಸಾರ ಯೋಜನಾ ಅನುಷ್ಠಾನಕ್ಕಾಗಿ ವಿಶೇಷ ಉದ್ದೇಶಿತ ವಾಹನವನ್ನು (Special</td></tr>
</table>

Purpose Vehicle-SPV) ಕಂಪನಿ ಕಾಯ್ದೆ 2013ರಡಿ ನೋಂದಾಯಿಸಿ ಸ್ಥಾಪಿಸಲಾಗಿದೆ.

- ಪ್ರಸ್ತಾಪಿತ ಯೋಜನೆಗಳಿಗೆ ವಿಸ್ತೃತಾ ಯೋಜನಾ ವರದಿ ತಯಾರಿಸಿ ಕಾಮಗಾರಿಗಳ ಅನುಷ್ಠಾನದಲ್ಲಿ SPV ಗೆ ನೆರವು ನೀಡಲು ಯೋಜನಾ ನಿರ್ವಹಣಾ ಸಮಾಲೋಚಕರನ್ನು ನೇಮಿಸಲಾಗಿದೆ.
- ಯೋಜನೆಯ ಮಾರ್ಗದರ್ಶನಕ್ಕೆ ಮತ್ತು ಮೇಲುಸ್ತುವಾರಿಗಾಗಿ ರಾಜ್ಯ ಮಟ್ಟದಲ್ಲಿ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ "ರಾಜ್ಯ ಮಟ್ಟದ ಉನ್ನತ ಅಧಿಕಾರಿಯುತ ಸಂಚಾಲನ ಸಮಿತಿಯನ್ನು" ರಚಿಸಲಾಗಿರುತ್ತದೆ. ಈ ಸಮಿತಿಯು ನಿಯಮಿತವಾಗಿ ಸಭೆಗಳನ್ನು ನಡೆಸಿ ಮಾರ್ಗದರ್ಶನ ನೀಡುತ್ತಿರುತ್ತದೆ.
- ನಗರಗಳು ಸಿದ್ಧಪಡಿಸಿರುವ ಕಾಮಗಾರಿಗಳ ವಿಸ್ತೃತಾ ಯೋಜನಾ ವರದಿಗಳಿಗೆ ತಾಂತ್ರಿಕ ಅನುಮೋದನೆ ನೀಡಲು "ರಾಜ್ಯ ಮಟ್ಟದ ಉಸ್ತುವಾರಿ ಸಂಸ್ಥೆಯಾದ ಕೆಯುಐಡಿಎಫ್‌ಸಿಯಲ್ಲಿ, ಬಾಹ್ಯ ಪರಿಣಿತ ಸದಸ್ಯರನ್ನು ಒಳಗೊಂಡ ತಾಂತ್ರಿಕ ಸಮಿತಿಗಳನ್ನು ರಚಿಸಲಾಗಿದೆ.
- ಯೋಜನೆಯ ಮಾರ್ಗಸೂಚಿಯನ್ವಯ, ಆಯಾ ನಗರಗಳ ಸಂಸತ್ ಸದಸ್ಯರು, ವಿಧಾನ ಸಭಾ ಸದಸ್ಯರು, ಮಹಾಪೌರರು, ಜಿಲ್ಲಾಧಿಕಾರಿಗಳು, ವ್ಯವಸ್ಥಾಪಕ ನಿರ್ದೇಶಕರು ಸ್ಮಾರ್ಟ್‌ಸಿಟಿ ಲಿಮಿಟೆಡ್, ತಾಂತ್ರಿಕ ತಜ್ಞರು, ವಾಣಿಜ್ಯ ಮಂಡಳಿಯ ಸದಸ್ಯರು, ಸ್ವಯಂ ಸೇವಾ ಸಂಸ್ಥೆ ಸದಸ್ಯರು ಹಾಗೂ ಇತರೆ ಸಮುದಾಯ ಆಧಾರಿತ ಸಂಸ್ಥೆಗಳ ಪ್ರತಿನಿಧಿಗಳು ಒಳಗೊಂಡಿರುವ "SMART CITY ADVISORY FORUM"ನ್ನು ಸ್ಥಾಪಿಸಲಾಗಿದೆ ಹಾಗೂ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ, ಈ ಸಮಿತಿಯು ನಿಯಮಿತವಾಗಿ ಸಭೆಗಳನ್ನು ನಡೆಸಿ ಯೋಜನೆಗಳ ಅನುಷ್ಠಾನ ಹಾಗೂ ಸಮಸ್ಯೆಗಳ ಬಗ್ಗೆ ಮಾರ್ಗದರ್ಶನ ನೀಡುತ್ತಿವೆ.
- ಮುಂದುವರೆದಂತೆ, ಯೋಜನಾ ಅನುಷ್ಠಾನದಲ್ಲಿ ಚುನಾಯಿತ ಪ್ರತಿನಿಧಿಗಳಿಗೆ ಹೆಚ್ಚಿನ ಪ್ರಾತಿನಿಧ್ಯವನ್ನು ನೀಡಲು ವಿಶೇಷ ಉದ್ದೇಶಿತ ವಾಹನಗಳಿಗೆ ಮಾರ್ಗದರ್ಶನ ಮತ್ತು ಕಾರ್ಯಚಟುವಟಿಕೆಗಳ ಮೇಲುಸ್ತುವಾರಿಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಅಧ್ಯಕ್ಷತೆಯಲ್ಲಿ "ಸ್ಮಾರ್ಟ್‌ಸಿಟಿ ಅನುಷ್ಠಾನ ಮತ್ತು ಪರಿಶೀಲನಾ ಸಮಿತಿ"ಯನ್ನು ನಗರ ಮಟ್ಟದಲ್ಲಿ ರಚಿಸಲಾಗಿದೆ. ಈ ಸಮಿತಿಗೆ ಜಿಲ್ಲಾ ಉಸ್ತುವಾರಿ ಸಚಿವರು ಸಹ-ಅಧ್ಯಕ್ಷರಾಗಿದ್ದು, ಲೋಕಸಭಾ ಸದಸ್ಯರುಗಳು, ವಿಧಾನಸಭಾ ಸದಸ್ಯರುಗಳು ಸಮಿತಿಯ ಸದಸ್ಯರಾಗಿದ್ದು, ಕಾಲಕಾಲಕ್ಕೆ ಸಭೆಗಳನ್ನು ನಡೆಸಲಾಗುತ್ತಿದೆ.

ಸರ್ಕಾರದಿಂದ ಕೈಗೊಂಡಿರುವ ಮೇಲಿನ ಪೂರಕ ಕ್ರಮಗಳ ಮೂಲಕ ಯೋಜನೆಯ ಅನುಷ್ಠಾನಕ್ಕೆ ಎದುರಾಗಿರುವ ಸವಾಲುಗಳಿಗೆ ಸೂಕ್ತ ಪರಿಹಾರಗಳನ್ನು ಕಂಡುಕೊಂಡು ಈಗ ಕಾಮಗಾರಿಗಳನ್ನು ತ್ವರಿತವಾಗಿ ಅನುಷ್ಠಾನಗೊಳಿಸಲಾಗುತ್ತಿದೆ. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ನಿಯಮಿತವಾಗಿ ಪ್ರಗತಿ

| | | |
|---|---|---|
| | | ಪರಿಶೀಲನಾ ಸಭೆಗಳನ್ನು ನಡೆಸಲಾಗುತ್ತಿದೆ.<br>ಸರ್ಕಾರದ ಈ ಪೂರಕ ಕ್ರಮಗಳಿಂದಾಗಿ ತುಮಕೂರು ಸ್ಮಾರ್ಟ್‌ಸಿಟಿ ಲಿಮಿಟೆಡ್‌ನ ಮೂಲ ಪ್ರಸ್ತಾವನೆಯಂತೆ ಸ್ಮಾರ್ಟ್‌ಸಿಟಿ ಅನುದಾನ ಹಾಗೂ ಪಿಪಿಪಿ ಮಾದರಿಯಡಿ ಕೈಗೊಂಡಿರುವ 185 ಕಾಮಗಾರಿಗಳ ಪೈಕಿ 155 ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ ಹಾಗೂ ಬಾಕಿ ಉಳಿದ 30 ಕಾಮಗಾರಿಗಳನ್ನು ಜೂನ್ 2023ರ ಒಳಗೆ ಪೂರ್ಣಗೊಳಿಸುವಂತೆ ತುಮಕೂರು ಸ್ಮಾರ್ಟ್‌ಸಿಟಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. |

ಸಂಖ್ಯೆ:ನಅಇ 205 ಸಿಎಸ್‌ಎಸ್ 2022

(ಬಿ.ಎ.ಬಸವರಾಜ)
ನಗರಾಭಿವೃದ್ಧಿ ಸಚಿವರು

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು